# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ : ಕೇಂದ್ರ ಕಛೇರಿ : ಬೆಂಗಳೂರು

ಸಂಖ್ಯೆ:ಕರಾಸಾ/ಕೇಕ/ನೇಮಕ/ಸಿ2/ 1088 /2019-20 ದಿನಾಂಕ 14.02.2020

## ಜಾಹೀರಾತು ಸಂಖ್ಯೆ : 01 /2020

ನಿಗಮದಲ್ಲಿ ಖಾಲಿ ಇರುವ ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ, ದರ್ಜೆ-3 ಹುದ್ದೆಗಳನ್ನು, ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿಗಳು, 1982 ಮತ್ತು ತದನಂತರದ ತಿದ್ದುಪಡಿಗಳ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ (ON LINE) ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಯ್ಕೆಗೊಂಡ ಅಭ್ಯರ್ಥಿಗಳನ್ನು ಅವಶ್ಯಕತೆಗೆ ಅನುಗುಣವಾಗಿ ಜಾರಿಯಲ್ಲಿರುವ ಮೀಸಲಾತಿ ನಿಯಮದ ಅನುಸಾರ ಎರಡು ವರ್ಷಗಳ ಕಾಲ "ಕೆಲಸದ ಮೇಲೆ ತರಬೇತಿಗೆ" (On the job Trainee) ನಿಯೋಜಿಸಲಾಗುವುದು. ವಿಭಾಗವಾರು ಹುದ್ದೆಗಳ ಕ್ರೂಢೀಕೃತ ಮೀಸಲಾತಿ ವರ್ಗೀಕರಣ ಈ ಕೆಳಕಾಣಿಸಿದಂತಿರುತ್ತದೆ.

### ಚಾಲಕ ಹುದ್ದೆಯ ವರ್ಗೀಕರಣ:

| | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 48 | 6 | 14 | 49 | 13 | 12 | 12 | 137 | 291 |
| ಮಹಿಳೆ | 58 | 10 | 20 | 58 | 19 | 19 | 19 | 194 | 397 |
| ಗ್ರಾಮೀಣ | 48 | 10 | 9 | 45 | 7 | 9 | 12 | 150 | 290 |
| ಮಾ.ಸೈ. | 17 | 6 | 4 | 18 | 1 | 3 | 5 | 61 | 115 |
| ಕ.ಮಾ. | 5 | 2 | 2 | 5 | 3 | 2 | 5 | 28 | 52 |
| ಯೋ.ಅ | 7 | 2 | 3 | 4 | 4 | 3 | 2 | 30 | 55 |
| ಒಟ್ಟು | 183 | 36 | 52 | 179 | 47 | 48 | 55 | 600 | 1200 |

### ಚಾಲಕ-ಕಂ-ನಿರ್ವಾಹಕ ಹುದ್ದೆಯ ವರ್ಗೀಕರಣ:

| | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 82 | 17 | 20 | 83 | 20 | 20 | 27 | 281 | 550 |
| ಮಹಿಳೆ | 128 | 25 | 38 | 128 | 36 | 36 | 45 | 424 | 860 |
| ಗ್ರಾಮೀಣ | 94 | 20 | 28 | 95 | 25 | 28 | 31 | 319 | 640 |
| ಮಾ.ಸೈ. | 38 | 9 | 6 | 38 | 8 | 7 | 13 | 124 | 243 |
| ಕ.ಮಾ. | 21 | 3 | 6 | 18 | 5 | 8 | 5 | 63 | 129 |
| ಯೋ.ಅ | 20 | 3 | 4 | 19 | 6 | 3 | 5 | 63 | 123 |
| ಒಟ್ಟು | 383 | 77 | 102 | 381 | 100 | 102 | 126 | 1274 | 2545 |

**ಮೇಲ್ಕಂಡ ಹುದ್ದೆಗಳ ಸಂಖ್ಯೆ/ವರ್ಗೀಕರಣವು ತಾತ್ಕಾಲಿಕವಾಗಿದ್ದು, ಅವಶ್ಯಕತೆ ಅನುಗುಣವಾಗಿ ಮಾರ್ಪಡಿಸಬಹುದಾಗಿದೆ. ಆಯ್ಕೆ ಹೊಂದಿದ ಅಭ್ಯರ್ಥಿಗಳನ್ನು ಕ.ರಾ.ರ.ಸಾ.ನಿಗಮದ ವ್ಯಾಪ್ತಿಯಲ್ಲಿನ ವಿಭಾಗಗಳು ಮತ್ತು ವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಯಾವುದೇ ಘಟಕಗಳಿಗೆ ನಿಯೋಜಿಸಬಹುದಾಗಿರುತ್ತದೆ (ಆಯ್ಕೆಯಾದ ಅಭ್ಯರ್ಥಿಗಳು ಕರಾರಸಾ ನಿಗಮದಿಂದ ಇತರ ಸಂಸ್ಥೆಗಳಾದ ವಾ.ಕ.ರ.ಸಾ.ಸಂಸ್ಥೆ, ಬೆಂ.ಮ.ನ.ಸಾ.ಸಂಸ್ಥೆ ಮತ್ತು ಈ.ಕ.ರ.ಸಾ.ಸಂಸ್ಥೆಗಳಿಗೆ ವರ್ಗಾವಣೆ ಹೊಂದಲು ಅವಕಾಶವಿರುವುದಿಲ್ಲ)**

ಮಾ.ಸೈ.=ಮಾಜಿ ಸೈನಿಕ, ಕ.ಮಾ.ಅ=ಕನ್ನಡ ಮಾಧ್ಯಮ ಅಭ್ಯರ್ಥಿ, ಯೋ.ಅ=ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ

**<u>ಟಿಪ್ಪಣಿ</u> : ಸಮತಳ ಮೀಸಲಾತಿಯ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.**

**I** **<u>ಅರ್ಹತೆಗಳು</u>** ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ **20.03.2020** ಕ್ಕೆ ಅಭ್ಯರ್ಥಿಗಳು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರಬೇಕು.

1. **ಶೈಕ್ಷಣಿಕ ವಿದ್ಯಾರ್ಹತೆ :**

ಅ) **<u>ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಹುದ್ದೆಗಳಿಗೆ.</u>**

1. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರಬೇಕು. (ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾಗುವ ಎಸ್.ಎಸ್.ಎಲ್.ಸಿ. ಅಥವಾ ರಾಜ್ಯ ಸರ್ಕಾರವು ತತ್ಸಮಾನವೆಂದು ಪರಿಗಣಿಸಿದ ವಿದ್ಯಾರ್ಹತೆ)

**ಸೂಚನೆ: ಮುಕ್ತ ವಿದ್ಯಾಲಯದಿಂದ ವಿತರಿಸಿರುವ 500 ಅಂಕಗಳ ಎಸ್ಎಸ್ಸಿ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ.**

2. ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಚಾಲ್ತಿಯಲ್ಲಿರುವ ಭಾರಿ ಸರಕು ಸಾಗಾಣಿಕೆ ವಾಹನ( ಹೆಚ್.ಟಿ.ವಿ) ಚಾಲನಾ ಪರವಾನಗಿ ಹೊಂದಿ ಕನಿಷ್ಟ ಎರಡು ವರ್ಷಗಳಾಗಿರಬೇಕು ಮತ್ತು ಪ್ರಯಾಣಿಕರ ಭಾರಿ ವಾಹನ ಚಾಲನಾ ಪರವಾನಗಿ ಹಾಗೂ ಕರ್ನಾಟಕ ಪಿ.ಎಸ್.ವಿ ಬ್ಯಾಡ್ಜ್ ಹೊಂದಿರಬೇಕು.

**<u>ಆ) ಇತರೆ ಅರ್ಹತೆಗಳು</u>**

<u>ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಮಾತ್ರ</u> ಚಾಲ್ತಿಯಲ್ಲಿರುವ ನಿರ್ವಾಹಕ ಪರವಾನಗಿ ಮತ್ತು ಕರ್ನಾಟಕ ಬ್ಯಾಡ್ಜ್ ಹೊಂದಿರಬೇಕು.

2. **ವಯೋಮಿತಿ :**

ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದಂದು ಕನಿಷ್ಠ 24 ವರ್ಷಗಳು ತುಂಬಿರಬೇಕು.

ಅ. ಗರಿಷ್ಠ ವಯೋಮಿತಿ ಈ ಕೆಳಕಾಣಿಸಿದ ವಯಸ್ಸು ಮೀರಿರಬಾರದು.

| ವರ್ಗ | **ವಯಸ್ಸು** |
|---|---|
| **ಸಾಮಾನ್ಯ ವರ್ಗ** | 35 ವರ್ಷಗಳು |
| **2ಎ/2ಬಿ/3ಎ/3ಬಿ** | 38 ವರ್ಷಗಳು |
| **ಪ.ಜಾತಿ/ಪ.ಪಂ/ ವರ್ಗ-1** | 40 ವರ್ಷಗಳು |

ಆ. ಇಲಾಖಾ ಅಭ್ಯರ್ಥಿಗಳು ಅವರು ಸಲ್ಲಿಸಿರುವ ಸೇವಾವಧಿಯ ಗರಿಷ್ಠ 10 ವರ್ಷಗಳಿಗೆ ಮೀರದಂತೆ ವಯೋಮಿತಿ ರಿಯಾಯಿತಿಗೆ ಅರ್ಹರು ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

ಇ. ಮಾಜಿ ಸೈನಿಕ ಅಭ್ಯರ್ಥಿಯು ಭಾರತದ ಸಶಸ್ತ್ರ ಪಡೆಯಲ್ಲಿ ಕನಿಷ್ಟ 15 ವರ್ಷಗಳ ಸೇವೆ ಸಲ್ಲಿಸಿರುವ ಬಗ್ಗೆ ನಿಗಧಿತ ಡಿಸ್‌ಜಾರ್ಜ್ ಪ್ರಮಾಣ ಪತ್ರ ಹೊಂದಿರಬೇಕು ಮತ್ತು ಅವರು ಸಲ್ಲಿಸಿದ ಸೇವೆಯ ಜೊತೆಗೆ ಮೂರು ವರ್ಷಗಳ ವಯೋಮಿತಿಯ ರಿಯಾಯಿತಿಗೆ ಅರ್ಹರು ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

3. **ದೇಹದಾರ್ಢ್ಯತೆ** :

| | ಪುರುಷರು | ಮಹಿಳೆಯರು |
|---|---|---|
| ಎತ್ತರ | 163 ಸೆಂ.ಮೀ | 153 ಸೆಂ.ಮೀ |
| ತೂಕ | 55 ಕೆ.ಜಿ | 50 ಕೆ.ಜಿ |

## II <u>ಮೀಸಲಾತಿಗಳು</u>

i. **ಜಾತಿ/ವರ್ಗ ಮೀಸಲಾತಿ** : ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, ಮತ್ತು 3ಬಿ ಮೀಸಲಾತಿಗಳಲ್ಲಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿತ ಕೊನೆಯ ದಿನಾಂಕದೊಳಗೆ ಸರ್ಕಾರ ನಿಗದಿಪಡಿಸಿರುವ ನಮೂನೆಯಲ್ಲಿ ಸಂಬಂಧಿಸಿದ ಪ್ರಾಧಿಕಾರಿಗಳಿಂದ ಜಾತಿ ಪ್ರಮಾಣ ಪತ್ರ ಪಡೆದಿರಬೇಕು ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಜಾತಿ/ಆದಾಯದ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು.
**<u>(ಸೂಚನೆ: ವಿದ್ಯಾಭ್ಯಾಸ/ಶಿಕ್ಷಣಕ್ಕಾಗಿ/ಇತರೆ ಸರ್ಕಾರಿ ಸೌಲಭ್ಯಕ್ಕಾಗಿ ಅಥವಾ ಸಾಲಕ್ಕಾಗಿ ಪಡೆದಿರುವ</u> ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ).**

ii. **ಗ್ರಾಮೀಣ ಮೀಸಲಾತಿ**
ಸರ್ಕಾರದ ಪ್ರಚಲಿತ ಆದೇಶಗಳಂತೆ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲ ಎಂಬ ಬಗ್ಗೆ ಪ್ರಮಾಣ ಪತ್ರ ಸಲ್ಲಿಸದ ಪಕ್ಷದಲ್ಲಿ ಸಾಮಾನ್ಯ ವರ್ಗಕ್ಕೆ ಪರಿಗಣಿಸುವುದರಿಂದ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.)

ಅ. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಹಾಗೂ 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಗ್ರಾಮೀಣ ಪ್ರಮಾಣ ಪತ್ರವನ್ನು ಸರ್ಕಾರದ ನಿಗದಿತ ನಮೂನೆಯಲ್ಲಿ ಸಂಬಂದಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪಡೆದ ಪ್ರಮಾಣ ಪತ್ರದ ಮೇಲೆ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲು ಸಹಿ ಮಾಡಿಸಿದ್ದಲ್ಲಿ ಮಾತ್ರ ಗ್ರಾಮೀಣ ಮೀಸಲಾತಿಗೆ ಪರಿಗಣಿಸಲಾಗುವುದು.

ಆ. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಮೇಲಿನಂತೆ ಪಡೆದ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದೊಂದಿಗೆ ಮೇಲುಸ್ತರಕ್ಕೆ ಸೇರಿಲ್ಲ ಎಂಬ ಬಗ್ಗೆ ಸಂಬಂದಪಟ್ಟ ತಹಸೀಲ್ದಾರರಿಂದ ಪಡೆದ ಪ್ರಮಾಣ ಪತ್ರವನ್ನು ಹೊಂದಿರಬೇಕು.

iii. **ಕನ್ನಡ ಮಾಧ್ಯಮ ಮೀಸಲಾತಿ:**

ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಎಲ್ಲಾ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ, ಸರ್ಕಾರದ ಅಧಿಸೂಚನೆ ಸಂಖ್ಯೆ : ಸಿಆಸುಇ/71/ಸೆನೆನಿ/2001 ದಿನಾಂಕ 24-10-2002 ರನ್ವಯ ನಿಗಧಿತ ನಮೂನೆಯಲ್ಲಿ ಸಂಬಂದಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಮೊಹರಿನೊಂದಿಗೆ ಪಡೆದ ಪ್ರಮಾಣ ಪತ್ರ ಹೊಂದಿದ್ದಲ್ಲಿ ಮಾತ್ರ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಾಗುತ್ತಾರೆ. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಲ್ಲಿ ಕನ್ನಡ ಮಾಧ್ಯಮ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

iv. **ಯೋಜನಾ ನಿರಾಶ್ರಿತರು :**

ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆಃ ಡಿಪಿಎಆರ್ 23 ಎಸ್ಆರ್ಆರ್ 99 ದಿನಾಂಕಃ 23-11-2000 ರಲ್ಲಿ ತಿಳಿಸಿರುವಂತೆ ಯೋಜನೆಗಳ ನಿರಾಶ್ರಿತರ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಪಡೆದ ಪ್ರಮಾಣ ಪತ್ರವನ್ನು ಹೊಂದಿದ್ದಲ್ಲಿ ಮಾತ್ರ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹರಾಗುತ್ತಾರೆ. ಆದರೆ ಸದರಿ ಸರ್ಕಾರದ ಆದೇಶದನುಸಾರ ಈ ನಿಯಮ ಜಾರಿಗೆ ಬಂದ ದಿನಾಂಕದಿಂದ ಹಿಂದಕ್ಕೆ 20 ವರ್ಷಗಳ ಪೂರ್ವದಲ್ಲಿ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡಂತಹ ಪ್ರಕರಣಗಳ ಅಭ್ಯರ್ಥಿಗಳು ಈ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

v. **ಮಾಜಿ ಸೈನಿಕ :**

"EX-SERVICEMEN" means a person, who has served in any rank [whether as a combatant or as a non-combatant] in the regular Army, Navy and Air Forces of the Union [but does not include a person who has served in the Defense Security Corps, the General Reserve Engineering Force, the Lok Sahayak Sene and Para Military Forces] and

a) Who has retired from such services earning his pension, or
b) Who has been released from such service on Medical Grounds attributable to military service or circumstances beyond his control and awarded medical or other disability pensions, or
c) Who has been released [otherwise than on his own request] from such service as a result of reduction in Establishment, or
d) Who has been released from such service after completing the specific period of engagement [otherwise than at his own request or by way of dismissal or discharge on account of misconduct or in-efficiency] and has been given a gratuity and includes personnel of the Territorial Army of the following categories, namely:
   (i) Pension holders, for continuous embodied service
   (ii) Pension, with disability attributable to military service; and
   (iii) Gallantry award winners

## III ನಿಗಧಿತ ಅರ್ಜಿ ಶುಲ್ಕ

**ಅ. ಅರ್ಜಿ ಶುಲ್ಕದ ವಿವರ (ಪ್ರತಿ ಹುದ್ದೆಗೂ ಪ್ರತ್ಯೇಕ ಅರ್ಜಿ ಶುಲ್ಕ)**

| ವರ್ಗ | ಶುಲ್ಕ |
|---|---|
| ಸಾಮಾನ್ಯ ವರ್ಗ, 2ಎ, 2ಬಿ, 3ಎ ಮತ್ತು 3ಬಿ | ರೂ. 500/- |
| ಪ.ಜಾತಿ, ಪ.ಪಂಗಡ, ವರ್ಗ-1, ಮಾಜಿ ಸೈನಿಕ ಮತ್ತು ಅಶಕ್ತ ಮಾಜಿ ಸೈನಿಕರ ಅವಲಂಬಿತರಿಗೆ | ರೂ. 250/- |

**ಆ. ಅರ್ಜಿ ಶುಲ್ಕ ಪಾವತಿ ಮಾಡುವ ವಿಧಾನ :**

www.ksrtcjobs.karnataka.gov.in ನಲ್ಲಿ ON LINE ಮೂಲಕ ಅರ್ಜಿ ಸಲ್ಲಿಸಿದ ನಂತರ ಅಭ್ಯರ್ಥಿಯು ಚಲನ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (Computerised Post Offices Only) ಮಾತ್ರ e-payment ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ಕಚೇರಿಯಲ್ಲಿ ಶುಲ್ಕ ಪಾವತಿಸಿದ ಮೂಲ ಚಲನ್ ಪ್ರತಿಯನ್ನು ದಾಖಲಾತಿ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು, ಬೇರೆ ಯಾವುದೇ ರೀತಿ ಶುಲ್ಕ ಪಾವತಿಸಿದ್ದಲ್ಲಿ ಸದರಿ ಅರ್ಜಿಯನ್ನು ಪರಿಗಣಿಸುವುದಿಲ್ಲ. **"ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಎರಡೂ ಹುದ್ದೆಗಳಿಗೂ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೂ ಒಂದೇ ಅರ್ಜಿ ಸಲ್ಲಿಸಿ ಎರಡೂ ಹುದ್ದೆಗಳ ಅರ್ಜಿ ಶುಲ್ಕ ಪಾವತಿಸುವುದು".**

ಇ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಸಂಸ್ಥೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

## IV ಅರ್ಜಿಯನ್ನು ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ

ಅ. ಅರ್ಜಿಯನ್ನು ಕಡ್ಡಾಯವಾಗಿ ಕ ರಾ ರ ಸಾ ನಿಗಮದ ವೆಬ್‌ಸೈಟ್ www.ksrtcjobs.karnataka.gov.inನಲ್ಲಿ ಆನ್‌ಲೈನ್ (ONLINE) ಮುಖಾಂತರವೇ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಅಗತ್ಯವಾದ ವಿವರಗಳಿಗೆ ಸಂಸ್ಥೆಯ ವೆಬ್‌ಸೈಟ್ www.ksrtcjobs.karnataka.gov.inನ್ನು ಗಮನಿಸುವುದು.

ಆ. ದಿನಾಂಕ **24.02.2020** ರಿಂದ **20.03.2020** ರವರೆಗೆ ಸಂಸ್ಥೆಯ ವೆಬ್‌ಸೈಟ್ ತೆರೆದಿರುತ್ತದೆ. ಅರ್ಜಿಗಳನ್ನು ಕೊನೆಯ ದಿನಾಂಕವಾದ **20.03.2020** ರ ಸಂಜೆ **17:00** ಗಂಟೆಯೊಳಗೆ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಶುಲ್ಕವನ್ನು ದಿನಾಂಕ **23.03.2020** ರ ಒಳಗಾಗಿ ಅಂಚೆ ಕಚೇರಿಯ ಕೆಲಸದ ವೇಳೆಯಲ್ಲಿ ಪಾವತಿಸುವುದು.

ಇ. ಮೇಲ್ಕಂಡ ಕೊನೆಯ ದಿನಾಂಕ ಮತ್ತು ಸಮಯದ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ. ಒಬ್ಬ ಅಭ್ಯರ್ಥಿ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಬಹುದಾಗಿದ್ದು ತಿದ್ದುಪಡಿ ಮಾಡಲು ಅವಕಾಶ ಇರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಸೂಚನೆಗಳನ್ನು ಓದಿ, ಅರ್ಥ ಮಾಡಿಕೊಂಡ ನಂತರ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಿ, ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಹಾಗೂ ಸಹಿಯನ್ನು ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಿ ಸಲ್ಲಿಸತಕ್ಕದ್ದು. ಅಪ್‌ಲೋಡ್ ಮಾಡಿ ಸಲ್ಲಿಸಿದ ಮುದ್ರಿತ ಅರ್ಜಿ ಹಾಗೂ ಅರ್ಜಿ ಶುಲ್ಕ ಪಾವತಿಯ ಅಂಚೆ ಕಚೇರಿ ಚಲನ್ ಪ್ರತಿಗಳನ್ನು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಂಡು ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವುದು. **ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ.**

## V ಆಯ್ಕೆ ವಿಧಾನ

1. ದೇಹದಾರ್ಢ್ಯತೆ ಮತ್ತು ಮೂಲ ದಾಖಲಾತಿಗಳ ಪರಿಶೀಲನೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ ಸಂಸ್ಥೆಯ ಗಣಕೀಕೃತ ಚಾಲನಾ ಪಥದಲ್ಲಿ ತಲಾ 25 ಅಂಕಗಳಂತೆ ಎರಡು ಬಾರಿ ಚಾಲನಾ ವೃತ್ತಿ ಪರೀಕ್ಷೆಗಳನ್ನು ನಡೆಸಲಾಗುವುದು. ಚಾಲನಾ ವೃತ್ತಿ ಪರೀಕ್ಷೆಯಲ್ಲಿ 5 ವಿವಿಧ ರೀತಿಯ ಪರೀಕ್ಷೆಗಳಿದ್ದು, ಎರಡು ಬಾರಿ ನಡೆಸಲಾಗುವ ಈ ಎಲ್ಲಾ ಪರೀಕ್ಷೆಗಳಲ್ಲಿ ಕನಿಷ್ಠ 25 ಅಂಕಗಳು ಮತ್ತು ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಉತ್ತೀರ್ಣರೆಂದು ಪರಿಗಣಿಸಲಾಗುವುದು. 25 ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು ಹಾಗೂ ಅವರುಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಹೊರಗಿಡಲಾಗುವುದು.

2. ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆಗೆ ಒಮ್ಮೆ ಮಾತ್ರ ಅವಕಾಶ ನೀಡಲಾಗುವುದು. ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಪಡೆದ ಅಂಕಗಳನ್ನೇ ಎರಡೂ ಹುದ್ದೆಗಳ ಆಯ್ಕೆಗೆ ಪರಿಗಣಿಸಲಾಗುವುದು.

3. ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಒಂದೇ ಅರ್ಜಿಯಲ್ಲಿ ಎರಡೂ ಹುದ್ದೆಗಳನ್ನು ನಮೂದಿಸಿ ತಪ್ಪದೆ ಹುದ್ದೆಗಳ ಆದ್ಯತೆಗಳನ್ನು ನೀಡುವುದು ಹಾಗೂ ಎರಡೂ ಹುದ್ದೆಗಳ ಅರ್ಜಿ ಶುಲ್ಕವನ್ನು ಒಟ್ಟಿಗೆ ಪಾವತಿಸುವುದು. ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಸಂದರ್ಭಗಳಲ್ಲಿ ಅಭ್ಯರ್ಥಿಗಳ ಪ್ರಾಶಸ್ತ್ಯ ಮೇಲೆ ಚಾಲಕ ಅಥವಾ ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಆಯ್ಕೆ ಮಾಡಲಾಗುವುದು.

4. ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಮಾತ್ರ ಪರಿಗಣಿಸಿ ಸರ್ಕಾರದ ಪ್ರಚಲಿತ ಮೀಸಲಾತಿ ನಿಯಮಗಳನುಸಾರ ಆಯ್ಕೆ ಮಾಡಲಾಗುವುದು. ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳನ್ನು ಪರಿಗಣಿಸಲಾಗುವುದಿಲ್ಲ.

5. ಉತ್ತಮ ಚಾಲನಾ ಕೌಶಲ್ಯವಿರುವ ಅಭ್ಯರ್ಥಿಗಳ ಆಯ್ಕೆ ದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಚಾಲನಾ ವೃತ್ತಿ ಪರೀಕ್ಷೆಯ 5 ವಿವಿಧ ಪರೀಕ್ಷೆಗಳ ಪೈಕಿ ಈ ಕೆಳಕಂಡ 3 ಪರೀಕ್ಷೆಗಳಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಗಳಿಸಿದ್ದಲ್ಲಿ ಮಾತ್ರ ಮುಂದಿನ ವೃತ್ತಿ ಪರೀಕ್ಷೆಗೆ ಅರ್ಹರಾಗುತ್ತಾರೆ.

| ಕ್ರ ಸಂ | ಪರೀಕ್ಷೆಯ ವಿಧಾನ | **ಮೊದಲನೆಯ ಪರೀಕ್ಷೆಗೆ** ನಿಗದಿಪಡಿಸಿರುವ ಅಂಕಗಳು | **ಎರಡನೇ ಪರೀಕ್ಷೆಗೆ** ನಿಗದಿಪಡಿಸಿರುವ ಅಂಕಗಳು | ಎರಡೂ ಪರೀಕ್ಷೆಯ ಒಟ್ಟು ಅಂಕಗಳು | ಎರಡೂ ಪರೀಕ್ಷೆಗಳಿಂದ ಗಳಿಸಬೇಕಾದ **ಕನಿಷ್ಠ ಅಂಕಗಳು** | ಸಮಯ |
|---|---|---|---|---|---|---|
| 1 | ಬಸ್ಸನ್ನು "ಎಸ್" ರ ಪಥದಲ್ಲಿ ಹಿಂದಕ್ಕೆ ಚಲಿಸುವುದು. (Reverse 'S') | 07 | 07 | 14 | 07 | 3 ನಿಮಿಷ |
| 2 | ಬಸ್ಸನ್ನು ಹಿಮ್ಮುಖ ಚಲಿಸಿ ನಿಲುಗಡೆ ಮಾಡುವುದು. (Reverse parking) | 06 | 06 | 12 | 06 | 1 ನಿಮಿಷ |
| 3 | ಬಸ್ಸನ್ನು ಏರುಗತಿಯಲ್ಲಿ ನಿಲ್ಲಿಸಿ ಮುಂದಕ್ಕೆ ಚಲಿಸುವುದು. (Up-gradient) | 05 | 05 | 10 | 05 | ಸಮಯ ಇಲ್ಲ |

ದೇಹದಾರ್ಢ್ಯತೆ ಮತ್ತು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾದ ಅಭ್ಯರ್ಥಿಗಳು ಅಗತ್ಯ ಮೂಲ ದಾಖಲಾತಿಗಳನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.

## VI ತರಬೇತಿ ಅವಧಿ, ಭತ್ಯೆ ಹಾಗೂ ವೇತನ ಶ್ರೇಣಿ

ಅ) ಆಯ್ಕೆಗೊಂಡ ಅಭ್ಯರ್ಥಿಗಳನ್ನು ಹುದ್ದೆಯಲ್ಲಿ ಎರಡು ವರ್ಷಗಳ ಕಾಲ **"ಕೆಲಸದ ಮೇಲಿ ತರಬೇತಿಗೆ"** ನಿಯೋಜಿಸಲಾಗುವುದು. ಸದರಿ ತರಬೇತಿ ಅವಧಿಯಲ್ಲಿ, ಚಾಲಕರು ಮಾಸಿಕ **ರೂ.10,000/-**, ಚಾಲಕ-ಕಂ-ನಿರ್ವಾಹಕರು **ರೂ.9,100/-**, ತರಬೇತಿ ಭತ್ಯೆ ಪಾವತಿಗೆ ನಿಯಮಾನುಸಾರ ಅರ್ಹರಿರುತ್ತಾರೆ. ಒಂದು ವೇಳೆ ಚಾಲಕ-ಕಂ-ನಿರ್ವಾಹಕರಾಗಿ ಎರಡೂ ಹುದ್ದೆಗಳ ಕರ್ತವ್ಯ ನಿರ್ವಹಿಸಿದಲ್ಲಿ ಪ್ರಚಲಿತ ನಿಯಮಾವಳಿಗಳ ಪ್ರಕಾರ ವಿಶೇಷ ಭತ್ಯೆ ಹಾಗೂ ಅನ್ವಯಿಸುವ ಇತರೆ ಭತ್ಯೆಗಳಿಗೆ ಅರ್ಹರಾಗುತ್ತಾರೆ.

ಆ) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷಗಳ ತರಬೇತಿ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿದಲ್ಲಿ, ಖಾಯಂಪೂರ್ವ ಪರೀಕ್ಷಾರ್ಥ ಸೇವೆಯಲ್ಲಿ ನೇಮಕಗೊಳಿಸಿ ಕಾಲಿಕ ವೇತನ ಶ್ರೇಣಿ **ರೂ.12400-170-12740-250-14240-320-15840-420-16680-530-18270-640-19550** ರನ್ವಯ ವೇತನ ಪಾವತಿಸಲಾಗುವುದು (ಪರಿಷ್ಕರಣೆಗೆ ಒಳಪಟ್ಟಿರುತ್ತದೆ).

## VII ದಾಖಲಾತಿಗಳ ವಿವರ

ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ದಾಖಲಿಸಿರುವ ಮೀಸಲಾತಿಗಳು, ಭಾರಿ ವಾಹನ ಚಾಲನಾ/ನಿರ್ವಾಹಕ ಪರವಾನಿಗೆ, ಮುಂತಾದ ವಿವರಗಳ ಎಲ್ಲಾ ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು ಹಾಗೂ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳು ಹಾಗೂ ಆನ್‌ಲೈನ್ ನಲ್ಲಿ ಸಲ್ಲಿಸಿ ಮುದ್ರಿಸಿಕೊಂಡಿರುವ ಅರ್ಜಿ ಹಾಗೂ ಅರ್ಜಿ ಶುಲ್ಕ ಪಾವತಿಯ ಚಲನ್ ಪ್ರತಿಗಳನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

## VIII ಸೂಚನೆಗಳು

1. ಅಭ್ಯರ್ಥಿಗಳು ಮೂಲ ದಾಖಲೆ ಪರಿಶೀಲನೆಗೆ ಮತ್ತು ಚಾಲನಾ ವೃತ್ತಿ ಪರೀಕ್ಷೆಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
2. ಸಂಸ್ಥೆಯ ನೇಮಕಾತಿ ನಿಯಮಾವಳಿ ಅನುಸಾರ ಅಂಗವಿಕಲರು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.
3. ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹೆಸರನ್ನು ನೊಂದಾಯಿಸಿದ ಅರ್ಹ ಅಭ್ಯರ್ಥಿಗಳೂ ಸಹ ಈ ಜಾಹೀರಾತಿನ ಅನುಸಾರ ಅರ್ಜಿ ಸಲ್ಲಿಸಬೇಕು.
4. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯಲ್ಲಿ ನಮೂದಿಸಿದ ವಿವರಗಳ ಆಧಾರದ ಮೇಲೆ ದೇಹದಾರ್ಢ್ಯತೆ, ಮೂಲದಾಖಲಾತಿಗಳ ಪರಿಶೀಲನೆ ಮತ್ತು ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗಲು ಕರೆಪತ್ರವನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಅರ್ಜಿ ಸಂಖ್ಯೆ ಮತ್ತು ಹುಟ್ಟಿದ ದಿನಾಂಕವನ್ನು ನಮೂದಿಸಿ ಮುದ್ರಿಸಿಕೊಳ್ಳಬೇಕಾಗಿರುತ್ತದೆ. ಆದ್ದರಿಂದ ನೇಮಕಾತಿಗೆ ಸಂಬಂಧಿಸಿದಂತೆ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ಹಾಗೂ ದಿನಪತ್ರಿಕೆಗಳಲ್ಲಿ ನೀಡುವ ಸೂಚನೆಗಳನ್ನು ಅಭ್ಯರ್ಥಿಗಳು ಆಗಾಗ್ಗೆ ಗಮನಿಸತಕ್ಕದ್ದು.

5. ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ/ಕೈಗಾರಿಕಾ/ವಾಣಿಜ್ಯಕ್ಕೆ ಸಂಬಂದಪಟ್ಟ ಅಥವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಅಧೀನದಲ್ಲಿರುವ ವಿಭಾಗಗಳಲ್ಲಿ ತೆಗೆದು ಹಾಕಲ್ಪಟ್ಟ ವ್ಯಕ್ತಿ ಅಥವಾ ಬದಲಿಯಾಗಿ/ ಅಥವಾ ಬದಲಿಯಾಗಿ / ತರಬೇತಿದಾರರಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ತೆಗೆದುಹಾಕಲ್ಪಟ್ಟಿದ್ದಲ್ಲಿ ಅಥವಾ ಸೇವೆಯಿಂದ ವಜಾ ಮಾಡಲ್ಪಟ್ಟಿದ್ದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

6. ಅರ್ಜಿಯಲ್ಲಿ ಸುಳ್ಳು ಮಾಹಿತಿ ನೀಡಿ ಅಥವಾ ನಕಲಿ ಪ್ರಮಾಣಪತ್ರ/ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಯಾವುದೇ ಸಮಯದಲ್ಲಾದರೂ ನೌಕರಿಯಿಂದ ವಜಾ ಮಾಡಲಾಗುವುದು ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

7. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್ ಸೈಟ್‌ನಲ್ಲಿ ನೀಡಿರುವ ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು.

8. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ನಿಗಮದ ನಿರ್ಧಾರವೇ ಅಂತಿಮವಾಗಿರುತ್ತದೆ.

9. ಆಯ್ಕೆಗೊಂಡು ನೇಮಕಾತಿಗೊಳ್ಳುವ ಅಭ್ಯರ್ಥಿಗಳು ಉಪಧನ ಪಾವತಿ ಕಾಯ್ದೆ 1972 ರನ್ವಯ ಪಡೆಯಲು ಅರ್ಹರಿರುತ್ತಾರೆ ಮತ್ತು ಮುಕ್ತ ವೇತನ ಶ್ರೇಣಿಗೆ ಅರ್ಹರಾಗುವುದಿಲ್ಲ.

10. ಎಸ್ ಎಸ್ ಎಲ್ ಸಿ ಅಥವಾ ತತ್ಸಮಾನ ಅಥವಾ ಮೇಲ್ದರ್ಜೆ ವಿದ್ಯಾರ್ಹತೆಯಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಧ್ಯಯನ ಮಾಡದೆ ಇದ್ದಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳು ನಿಗಮದ ವತಿಯಿಂದ ನಡೆಸಲಾಗುವ ಕನ್ನಡ ಭಾಷಾ ಜ್ಞಾನ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು, ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.

11. ಕರ್ನಾಟಕ ರಾಜ್ಯ/ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಸಂಸ್ಥೆ/ನಿಗಮ/ಉದ್ದಿಮೆಗಳಲ್ಲಿ ಕೆಲಸ ಮಾಡುತ್ತಿರುವವರು, ಈ ಜಾಹೀರಾತಿಗೆ ಅರ್ಜಿ ಸಲ್ಲಿಸಬಯಸಿದಲ್ಲಿ, ಅರ್ಜಿ ಸಲ್ಲಿಸಲು ಯಾವುದೇ ಆಕ್ಷೇಪಣೆ ಇಲ್ಲವೆಂಬ ಬಗ್ಗೆ ಸಂಬಂಧಪಟ್ಟ ಉದ್ಯೋಗದಾತರಿಂದ ಪ್ರಮಾಣ ಪತ್ರ ಪಡೆದಿರಬೇಕು ಹಾಗೂ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

12. ಆಯ್ಕೆಗೆ ಸಂಬಂದಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

13. ಚಾಲನಾ ವೃತ್ತಿ ಪರೀಕ್ಷೆ ನಡೆಸುವ ವಿಧಾನ, ವಿವರಗಳನ್ನು ನಿಗಮದ ವೆಬ್ ಸೈಟ್ www.ksrtcjobs.karnataka.gov.in ನಲ್ಲಿ ಪ್ರಕಟಿಸಲಾಗುವುದು.

14. ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಅಭ್ಯರ್ಥಿಗಳಿಂದ ಯಾವುದೇ ರೀತಿಯ ಪತ್ರ ವ್ಯವಹಾರ ಅಥವಾ ವಿಚಾರಣೆಗಳಿಗೆ ಆಸ್ಪದವಿರುವುದಿಲ್ಲ. ನೇಮಕಾತಿಯ ವಿವಿಧ ಹಂತಗಳಿಗೆ ಸಂಬಂದಿಸಿದ ಎಲ್ಲಾ ವಿವರಗಳನ್ನು ಸಂಸ್ಥೆಯ ವೆಬ್ ಸೈಟ್ www.ksrtcjobs.karnataka.gov.in ನಲ್ಲಿ ಅಪ್‌ಲೋಡ್ ಮಾಡಲಾಗುವುದರಿಂದ ಮಾಹಿತಿಗಾಗಿ ದಿನಪತ್ರಿಕೆಗಳು ಹಾಗೂ ಸಂಸ್ಥೆಯ ವೆಬ್‌ಸೈಟ್ ಅನ್ನು ಆಗಾಗ್ಗೆ ಗಮನಿಸುವುದು.

## IX ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು :

1. ಕ.ರಾ.ರ.ಸಾ.ನಿಗಮದಲ್ಲಿ ಚಾಲಕ, ಚಾಲಕ-ಕಂ-ನಿರ್ವಾಹಕ ಹುದ್ದೆಗಳನ್ನು ಗಣಕೀಕೃತ ಚಾಲನಾ ಪಥದಲ್ಲಿ ನಡೆಸುವ ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳನುಸಾರ ಮೆರಿಟ್ ಆಧಾರದ ಮೇಲೆ ಮೀಸಲಾತಿಗನುಗುಣವಾಗಿ ಭರ್ತಿಗೊಳಿಸಲಾಗುವುದು. ಅಭ್ಯರ್ಥಿಗಳ ಆಯ್ಕೆಯು ಸಂಪೂರ್ಣವಾಗಿ ಪಾರದರ್ಶಕವಾಗಿರುವುದರಿಂದ, ಯಾವುದೇ ಅವ್ಯವಹಾರ ಹಾಗೂ ಹಸ್ತಕ್ಷೇಪಗಳಿಗೆ ಅವಕಾಶವಿರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಈ ಬಗ್ಗೆ ಯಾವುದೇ ಮಧ್ಯವರ್ತಿಗಳ ಯಾವುದೇ ಆಸೆ, ಆಮಿಷಗಳಿಗೆ ಒಳಗಾಗಬಾರದು.
2. ಅಭ್ಯರ್ಥಿಗಳಿಗೆ ಮೂಲ ದಾಖಲಾತಿ ಪರಿಶೀಲನೆ ಮತ್ತು ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗಲು ಕರೆಪತ್ರಗಳನ್ನು ಮುದ್ರಿಸಿಕೊಳ್ಳಲು ಅನುಕೂಲವಾಗುವಂತೆ ಪ್ರಕಟಣೆಯನ್ನು ದಿನಪತ್ರಿಕೆಗಳಲ್ಲಿ ನೀಡಲಾಗುವುದು. ಅದರಂತೆ ನಿಮ್ಮ ಕರೆಪತ್ರಗಳನ್ನು ಸಂಸ್ಥೆಯ ವೆಬ್‌ಸೈಟ್ www.ksrtcjobs.karnataka.gov.in ನ ಮುಖಾಂತರ ಅರ್ಜಿ ನೋಂದಣಿ ಸಂಖ್ಯೆ ಮತ್ತು ಹುಟ್ಟಿದ ದಿನಾಂಕಗಳನ್ನು ನಮೂದಿಸಿ ಮುದ್ರಿಸಿಕೊಂಡು ಸದರಿ ಕರೆ ಪತ್ರದಲ್ಲಿನ ಸೂಚನೆಗಳಂತೆ ಮೂಲ ದಾಖಲಾತಿಗಳ ಪರಿಶೀಲನೆ/ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗತಕ್ಕದ್ದು. ಈ ಬಗ್ಗೆ ನಿಗಮದ www.ksrtcjobs.karnataka.gov.in ವೆಬ್‌ಸೈಟ್‌ನಲ್ಲಿ ನೇಮಕಾತಿಗೆ ಸಂಬಂಧಿಸಿದಂತೆ ಆಗಾಗ ನೀಡುವ ಸೂಚನೆಗಳನ್ನು ಗಮನಿಸತಕ್ಕದ್ದು.

**ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ 20.03.2020** ರ ಸಂಜೆ **17:00**

**ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ 23.03.2020** (ಅಂಚೆ ಕಛೇರಿಯ ವೇಳೆಯಲ್ಲಿ)

**-ಸಹಿ-**

**ವ್ಯವಸ್ಥಾಪಕ ನಿರ್ದೇಶಕರು**

ಪ್ರತಿಯನ್ನು:

1. ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ (ಎನ್‌ಫೋರ್ಸ್‌ಮೆಂಟ್ ಸೆಲ್), 4ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ.
2. ನಿರ್ದೇಶಕರು, ಉದ್ಯೋಗ ಮತ್ತು ತರಬೇತಿ, ಕೌಶಲ್ಯ ಭವನ, ಬನ್ನೇರುಘಟ್ಟ ರಸ್ತೆ, ಡೈರಿ ವೃತ್ತ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದ್ದು, ತಮ್ಮಲ್ಲಿ ನೋಂದಣಿಯಾಗಿರುವ ಅಭ್ಯರ್ಥಿಗಳಿಗೆ ಜಾಹೀರಾತಿಗೆ ಸ್ಪಂದಿಸಿ ಅರ್ಜಿ ಸಲ್ಲಿಸುವಂತೆ ತಿಳುವಳಿಕೆ ನೀಡಲು ಕೋರಲಾಗಿದೆ.
3. ವ್ಯವಸ್ಥಾಪಕ ನಿರ್ದೇಶಕರವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಕರಾರಸಾನಿಗಮ ಕೇಂದ್ರಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
4. ನಿರ್ದೇಶಕರು(ಸಿಬ್ಬಂದಿ:ಪರಿಸರ) / ನಿರ್ದೇಶಕರು(ಭದ್ರತಾ&ಜಾಗೃತಿ) ರವರ ಹಿರಿಯ/ಆಪ್ತ ಕಾರ್ಯದರ್ಶಿಗಳು, ಕರಾರಸಾನಿಗಮ, ಕೇಂದ್ರಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
5. ವ್ಯವಸ್ಥಾಪಕ ನಿರ್ದೇಶಕರು ಬೆಂಮಸಾನಿಗಮ/ವಾಕರಸಾನಿಗಮ/ಈಕರಸಾನಿಗಮ ರವರ ಆಪ್ತ ಕಾರ್ಯದರ್ಶಿಗಳು ರವರ ಮಾಹಿತಿಗಾಗಿ.
6. ಮುಖ್ಯ ಲೆಕ್ಕಾಧಿಕಾರಿಗಳು-ಆ.ಸ./ಮುಖ್ಯ ಸಂಚಾರ ವ್ಯವಸ್ಥಾಪಕರು(ಕಾರ್ಯಾಚರಣೆ)/ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾನಿಗಮ/ವಾಕರಸಾನಿಗಮ/ಈಕರಸಾನಿಗಮ ರವರ ಮಾಹಿತಿಗಾಗಿ.
8. ಎಲ್ಲಾ ಇಲಾಖಾ ಮುಖ್ಯಸ್ಥರು, ಕರಾರಸಾನಿಗಮ/ಬೆಂಮಸಾನಿಗಮ/ವಾಕರಸಾನಿಗಮ/ ಈಕರಸಾನಿಗಮ ರವರ ಮಾಹಿತಿಗಾಗಿ.
9. ಎಲ್ಲಾ ವಿಭಾಗ ಮುಖ್ಯಸ್ಥರು ಹಾಗೂ ಕಾರ್ಯ ವ್ಯವಸ್ಥಾಪಕರವರು, ಕರಾರಸಾನಿಗಮ/ ಬೆಂಮಸಾನಿಗಮ/ವಾಕರಸಾನಿಗಮ/ಈಕರಸಾನಿಗಮ ರವರ ಮಾಹಿತಿಗಾಗಿ ಹಾಗೂ ಈ ಜಾಹೀರಾತನ್ನು ನೌಕರರ ಮಾಹಿತಿಗಾಗಿ ಸಂಬಂಧಪಟ್ಟ ವಿಭಾಗೀಯ ಕಛೇರಿ/ಪ್ರಾದೇಶಿಕ

ಕಾರ್ಯಾಗಾರ/ಘಟಕಗಳಲ್ಲಿರುವ ಸೂಚನಾ ಫಲಕಗಳಲ್ಲಿ (ನೋಟೀಸ್ ಬೋರ್ಡ್) ಪ್ರಕಟಿಸಲು ಸೂಚಿಸಲಾಗಿದೆ.

10. ವಿಭಾಗ ನಿಯಂತ್ರಣಾಧಿಕಾರಿ, ಕ.ರಾ.ರ.ಸಾ.ನಿಗಮ, ಬೆಂಗಳೂರು ಕೇಂದ್ರ / ರಾಮನಗರ / ತುಮಕೂರು / ಕೋಲಾರ / ಚಿಕ್ಕಬಳ್ಳಾಪುರ / ದಾವಣಗೆರೆ / ಹಾಸನ / ಚಿಕ್ಕಮಗಳೂರು / ಮೈಸೂರು(ನಗರ) / (ಗ್ರಾಮಾಂತರ) / ಮಂಡ್ಯ / ಮಂಗಳೂರು / ಚಾಮರಾಜನಗರ / ಪುತ್ತೂರು / ಶಿವಮೊಗ್ಗ / ಚಿತ್ರದುರ್ಗ ವಿಭಾಗ ರವರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದ್ದು, ಜಾಹೀರಾತಿನ ಬಗ್ಗೆ ವಿಭಾಗ ಮಟ್ಟದಲ್ಲಿ ವ್ಯಾಪಕ ಪ್ರಚಾರ ನೀಡಿ ವಿಭಾಗಗಳಿಗೆ ಹೆಚ್ಚಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತೆ ಪ್ರಚಾರ ಮಾಡಲು ಸೂಚಿಸಲಾಗಿದೆ.

**ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ನೇಮಕ)**